ಆಯುಕ್ತರ ಕಛೇರಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ನೃಪತುಂಗ ರಸ್ತೆ ಬೆಂಗಳೂರು 01

ಸಂಖ್ಯೆ ಇ ಇ ಡಿ ಎಸ್ /ಶಿಕ್ಷಕ ಮಿತ್ರ/2020-21 ದಿನಾಂಕ:09-02-2023

## ಅಂತಿಮ ನೆನಪೋಲೆ

ವಿಷಯ:- ಇ ಇ ಡಿ ಎಸ್ ತಂತ್ರಾಂಶದಲ್ಲಿ ಶಿಕ್ಷಕರ ಸೇವಾವಿವರಗಳನ್ನು ಇಂದೀಕರಿಸಿ ಅಂತಿಮಗೊಳಿಸುವ ಬಗ್ಗೆ

ಉಲ್ಲೇಖ:- ಮಾನ್ಯ ಆಯುಕ್ತರ ಅಧಿಕೃತ ಜ್ಞಾಪನ ಸಂಖ್ಯೆ :-ಶಿ ವ ಕೋಶ ಸಾ ವ 01/2022-23 ದಿನಾಂಕ:- 30-01-2023

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಶಿಕ್ಷಕರ ಸೇವಾ ವಿವರಗಳನ್ನು ಅವರ ಸೇವಾ ವಹಿಯಂತೆ ಪರಿಶೀಲಿಸಿ ಇ ಇ ಡಿ ಎಸ್ ತಂತ್ರಾಂಶದಲ್ಲಿ ಇಂದೀಕರಿಸಿ ಅಂತಿಮಗೊಳಿಸಲು ದಿನಾಂಕ:-04/02/2023 ರ ಸಾಯಂಕಾಲ 5.30 ರವರೆಗೆ ಈಗಾಗಲೇ ಅವಕಾಶ ಕಲ್ಪಿಸಿ ಉಲ್ಲೇಖಿತ ಅಧಿಕೃತ ಜ್ಞಾಪನ ಪತ್ರದಲ್ಲಿ ಆದೇಶಿಸಲಾಗಿರುತ್ತದೆ.

ಈ ಕುರಿತಂತೆ ದಿನಾಂಕ:-01/02/2023 ರಂದು ಮಾನ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ಜೂಮ್ ಮುಖಾಂತರ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು (ಅಭಿವೃದ್ಧಿ) ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿಯೂ ಕೂಡಾ ಸೂಚಿಸಲಾಗಿರುತ್ತದೆ. ಆದ್ದರಿಂದ ಇಲಾಖೆಯ ಬಟವಾಡೆ ಅಧಿಕಾರಿಗಳಾದ ಪ್ರೌಢಶಾಲಾ ಮುಖ್ಯೋಪಾಧ್ಯಾಯರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸೇವಾವಹಿಗಳನ್ನು ಪರಿಶೀಲಿಸಿ ನಿಖರ ಮಾಹಿತಿಗಳನ್ನು ಇಇಡಿಎಸ್ ತಂತ್ರಾಂಶದಲ್ಲಿ ಮೇಲ್ಕಂಡ ನಿಗದಿತ ಕಾಲಮಿತಿಯೊಳಗೆ ಇಂದೀಕರಿಸಿ ಅಂತಿಮಗೊಳಿಸಿರುವ ಬಗ್ಗೆ ಪರಿಶೀಲಿಸಿ ಖಚಿತಪಡಿಸಲು ಸೂಚಿಸಿದೆ.

ಮುಂದುವರೆದು ನಿರ್ದಿಷ್ಟಪಡಿಸಲಾದ ದಿನಾಂಕದೊಳಗೆ ಇಂದೀಕರಿಸದೇ ಮುಂದಿನ ದಿನಗಳಲ್ಲಿ ವ್ಯತ್ಯಾಸಗಳಾದಲ್ಲಿ ಸಂಬಂದಿಸಿದ ಬಟವಾಡೆ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿಸಲಾಗುವುದು

ಈ ಬಗ್ಗೆ ಜಿಲ್ಲಾ ಉಪನಿರ್ದೇಶಕರು ಪರಿಶೀಲನಾ ವರದಿಯನ್ನು ದಿನಾಂಕ:-11/02/2023ರೊಳಗೆ ಈ ಕಛೇರಿಗೆ ಸಲ್ಲಿಸುವಂತೆ ತಿಳಿಸಿದೆ.

ಡಾ// ರೂಪಶ್ರೀ ಕೆ ಎ ಎಸ್
ಜಂಟಿ ನಿರ್ದೇಶಕರು (ಆಡಳಿತ)
9/2/2023

ಗೆ
ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ)
ಹಾಗೂ ಪ್ರೌಢಶಾಲಾ ಮುಖ್ಯೋಪಾಧ್ಯಾಯರಿಗೆ